## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಗರ ಪ್ರದೇಶದಲ್ಲಿ 3 ವರ್ಷಕ್ಕಿಂತ ಮೇಲ್ಪಟ್ಟ ವಯೋಮಾನದ ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತರದ ವಿಕಲಚೇತನರ ಎರಡು ಹಗಲು ಯೋಗಕ್ಷೇಮ ಕೇಂದ್ರಗಳಲ್ಲಿನ ಒಂದು ಮಗುವಿಗೆ ಮಾಹೆಯಾನ ನೀಡುತ್ತಿರುವ ರೂ.2500/-ಗಳನ್ನು ರೂ.10,000/-ಗಳಿಗೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಮಮಇ 268 ಪಿಹೆಚ್‌ಪಿ 2013, ದಿನಾಂಕ: 28-8-2013.

2) ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ:ವಿಹಿನಾಸಇ/ಹ.ಯೋ.ಕೇಂದ್ರ/ಮುಂ.ಹೊಸ ಯೋಜನೆ/23/2013-14/126, ದಿನಾಂಕ: 11-4-2014.

ಪ್ರಸ್ತಾವನೆ:

ನಗರ ಪ್ರದೇಶದಲ್ಲಿ 6 ರಿಂದ 18 ವರ್ಷದ ವಯೋಮಾನದವರೆಗಿನ ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರ ತೆರನಾದ ವಿಕಲಚೇತನ ಮಕ್ಕಳಿಗೆ ಎರಡು ಹಗಲು ಯೋಗಕ್ಷೇಮ ಕೇಂದ್ರಗಳನ್ನು ಪ್ರಾಯೋಗಿಕವಾಗಿ ಬೆಂಗಳೂರು ನಗರದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಸ್ಥಾಪಿಸಲು ಹಾಗೂ ಈ ಕೇಂದ್ರಗಳನ್ನು "ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ"ಯಡಿ ಅಳವಡಿಸಿ, 2013-14ನೇ ಸಾಲಿಗೆ ರಾಜ್ಯ ಅನುದಾನಕ್ಕೆ ಒಳಪಡಿಸಲು ಮೇಲೆ ಕ್ರ.ಸಂ.(1)ರಲ್ಲಿ ಓದಲಾದ ದಿನಾಂಕ: 28-8-2013ರ ಸರ್ಕಾರದ ಆದೇಶದಲ್ಲಿ ಆಡಳತಾತ್ಮಕ ಮಂಜೂರಾತಿ ನೀಡಲಾಗಿದೆ.

2014-15ನೇ ಸಾಲಿನ ಆಯವ್ಯಯದಲ್ಲಿ ನಗರ ಪ್ರದೇಶದಲ್ಲಿನ 3 ವರ್ಷಕ್ಕಿಂತ ಮೇಲ್ಪಟ್ಟ ವಯೋಮಾನದ ಮಾನಸಿಕ ಅಸ್ವಸ್ಥ, ಸೆರೆಬ್ರಲ್ ಪಾಲ್ಸಿ, ಆಟಿಸಂ ಮತ್ತು ತೀವ್ರತರದ ವಿಕಲಚೇತನರ 2 ಹಗಲು ಯೋಗಕ್ಷೇಮ ಕೇಂದ್ರಗಳಲ್ಲಿನ ಒಂದು ಮಗುವಿಗೆ ಮಾಹೆಯಾನ ನೀಡುತ್ತಿರುವ ರೂ.2,500/-ಗಳನ್ನು ರೂ.10,000/-ಗಳಿಗೆ ಹೆಚ್ಚಿಸಲು ಮತ್ತು ಇದಕ್ಕಾಗಿ ರೂ.50 ಲಕ್ಷಗಳನ್ನು ಒದಗಿಸುವುದಾಗಿ ಘೋಷಿಸಲಾಗಿದೆ. ಆದುದರಿಂದ ಈ ಪ್ರಸ್ತಾವಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಕ್ರ.ಸಂ (2)ರಲ್ಲಿ ಓದಲಾದ ದಿನಾಂಕ: 11-4-2014 ರ ಪತ್ರದಲ್ಲಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಮಮಇ 106 ಪಿಹೆಚ್‌ಪಿ 2014, ಬೆಂಗಳೂರು

### ದಿನಾಂಕ: 13-6-2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, 2014-15ನೇ ಸಾಲಿನ ಆಯವ್ಯಯದಲ್ಲಿ ನಗರ ಪ್ರದೇಶದಲ್ಲಿನ 3 ವರ್ಷಕ್ಕಿಂತ ಮೇಲ್ಪಟ್ಟ ವಯೋಮಾನದ ಮಾನಸಿಕ ಅಸ್ವಸ್ಥ, ಸೆರೆಬ್ರಲ್ ಪಾಲ್ಸಿ, ಆಟಿಸಂ ಮತ್ತು ತೀವ್ರತರದ ವಿಕಲಚೇತನರ 2 ಹಗಲು ಯೋಗಕ್ಷೇಮ ಕೇಂದ್ರಗಳಲ್ಲಿನ ಒಂದು ಮಗುವಿಗೆ ಮಾಹೆಯಾನ ಪ್ರಸ್ತುತ ನೀಡುತ್ತಿರುವ ರೂ.2,500/-ಗಳಿಂದ ರೂ.10,000/-(ಹತ್ತು ಸಾವಿರ ರೂಪಾಯಿಗಳು ಮಾತ್ರ)ಗಳಿಗೆ ಹೆಚ್ಚಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2235-02-800-0-04 (ಯೋಜನೆ) ಉಪ ಲೆಕ್ಕ ಶೀರ್ಷಿಕೆ 101 ಸಹಾಯಧನದಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

..2

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 353 ವೆಚ್ಚ-3 2014, ದಿನಾಂಕ: 2-6-2014 ಮತ್ತು ಪಿಡಿ 14 ಐಎಂಎಂ 2014, ದಿನಾಂಕ: 3-6-2014, ದಿನಾಂಕ: 3-6-2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

([illegible])
ಸರ್ಕಾರದ ~~ಅಧೀನ ಕಾರ್ಯದರ್ಶಿ~~-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು (ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4) ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
5) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6) ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ನಗರ ಜಿಲ್ಲೆ.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
8) ನಿರ್ದೇಶಕರು, ಪಿಎಂಐ ವಿಭಾಗ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9) ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:

1) ಪ್ರಧಾನ ಕಾರ್ಯದರ್ಶಿರವರು,ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.